155 ದಿ 72 53

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪ್ರತಾಪ್ ಸಿಂಹ ನಾಯಕ್ ಇವರು ನಿಯಮ 72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಹೇಳಿಕೆ**

**ಸೂಚನೆ:-**

ರಾಜ್ಯದಲ್ಲಿ, ಅಕ್ರಮ ಸಕ್ರಮಕ್ಕೆ ಸಲ್ಲಿಕೆಯಾಗಿರುವ ಹಲವಾರು ಅರ್ಹ ಅರ್ಜಿಗಳನ್ನು ಅಕಾರಣವಾಗಿ ಮತ್ತು ಅತಾರ್ಕಿಕವಾಗಿ ತಿರಸ್ಕರಿಸುವ ಪ್ರಕ್ರಿಯೆಯ ಕಾರಣದಿಂದಾಗ, ತಲತಲಾಂತರದಿಂದ ಉಳುಮೆ ಮಾಡುತ್ತಾ, ಆ ಭೂಮಿ ತಮಗೆ ಸಕ್ರಮಗೊಳ್ಳುವ ಆಶಾಭಾವನೆ ಹೊಂದಿದ್ದ ರೈತರಿಗೆ ತೀವ್ರ ಆಘಾತವಾಗಿದೆ.

ರಾಜ್ಯದಲ್ಲಿನ ಎಲ್ಲಾ ಅರ್ಹ ಬಗರ್‌ಹುಕುಂ ಸಾಗುವಳಿದಾರರ ಅರ್ಜಿ ಯಾವುದೇ ಕಾರಣಕ್ಕೂ ತಿರಸ್ಕಾರಗೊಳ್ಳದ ರೀತಿಯಲ್ಲಿ ಅವರಿಗೆ ನ್ಯಾಯ ದೊರಕಿಸಿಕೊಡಲು ಸರ್ಕಾರ ಅಗತ್ಯ ಹಾಗೂ ಸೂಕ್ತ ಕ್ರಮ ವಹಿಸದೇ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಕಂದಾಯ ಸಚಿವರ ಗಮನವನ್ನು ಸೆಳೆಯಲು ಬಯಸುತ್ತೇನೆ.

* * * *

**ಹೇಳಿಕೆ:-**

ಸರ್ಕಾರಿ ಜಮೀನುಗಳಲ್ಲಿ ಅನಧಿಕೃತವಾಗಿ ಮಾಡುತ್ತಿರುವ ಸಾಗುವಳಿಯನ್ನು ಸಕ್ರಮಗೊಳಿಸಲು ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 94ಎ, 94ಬಿ ಹಾಗೂ 94ಎ(4)ರಡಿ ಕ್ರಮವಾಗಿ ನಮೂನೆ 50, 53 ಹಾಗೂ 57ರಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿತ್ತು. ಸ್ವೀಕರಿಸಿದ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ಅರ್ಹ ಅರ್ಜಿಗಳನ್ನು ಬಗರ್ ಹುಕು ಸಾಗುವಳಿ ಸಕ್ರಮೀಕರಣ ಸಮಿತಿಯ ಮುಂದೆ ಮಂಡಿಸಿ ಅರ್ಹ ಫಲಾನುಭವಿಗಳಿಗೆ ಸಾಗುವಳಿ ಚೀಟಿಯನ್ನು ನೀಡಲಾಗುತ್ತಿದೆ. ಅನರ್ಹ ಅರ್ಜಿಗಳನ್ನು ತಿರಸ್ಕರಿಸಲು ಜಿಲ್ಲಾಧಿಕಾರಿಯರಿಗೆ ಅಧಿಕಾರವಿರುತ್ತದೆ. ಈ ಬಗ್ಗೆ ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್.ಡಿ. 45 ಎಲ್.ಜಿ.ಪಿ. 2023, ದಿನಾಂಕ: 01.12.2023ರಲ್ಲಿ ಜಿಲ್ಲಾಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಲಾಗಿದೆ.

ಸಂಖ್ಯೆ:ಆರ್.ಡಿ. 154 ಎಲ್.ಜಿ.ಕ್ಯೂ. 2025

**(ಕೃಷ್ಣ ಬೈರೇಗೌಡ)**
**ಕಂದಾಯ ಸಚಿವರು**